ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ,ದಿನಾಂಕ : 25ನೇ ಜುಲೈ, 2019

6. ರಾಯಚೂರು ನಗರದಲ್ಲಿರುವ ಬಸ್ ನಿಲ್ದಾಣ ಹಾಗೂ ನೆರವಾರ ತಾಲ್ಲೂಕು ಬಸ್ ನಿಲ್ದಾಣಗಳ ಬಗ್ಗೆ

ಶ್ರೀಎನ್.ಎಸ್.ಬೋಸ್‌ರಾಜು(ವಿಧಾನಸಭೆಯಿಂದಚುನಾಯಿತರಾದವರು):-

588 (777) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರಿನಲ್ಲಿರುವ ಪ್ರಸ್ತುತ ಬಸ್ ನಿಲ್ದಾಣವನ್ನು ನಗರದ ಹೊರ-ಭಾಗಕ್ಕೆ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ನೂತನ ತಾಲ್ಲೂಕು ಕೇಂದ್ರ ನೆರವಾರ ಪಟ್ಟಣದಲ್ಲಿ ಹೊಸ ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಲಿಂಗಸುಗೂರು ಪಟ್ಟಣದಲ್ಲಿ ನೂತನ ಬಸ್ ನಿಲ್ದಾಣ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ ;

(ಈ) ರಾಯಚೂರು ಜಿಲ್ಲೆ, ಲಿಂಗಸುಗೂರು ಪಟ್ಟಣದಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಉ) ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಮುದಗಲ್ಲ ಪಟ್ಟಣದಲ್ಲಿ ಬಸ್ ಡಿಪೋ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಪ್ರತಿ ದಿನ ಮುದಗಲ್ಲ ಪಟ್ಟಣಕ್ಕೆ ವಿವಿಧ ಡಿಪೋಗಳಿಂದ ಸಂಚರಿಸುತ್ತಿರುವ ಬಸ್‌ಗಳ ಸಂಖ್ಯೆ ಹಾಗೂ ಮಾರ್ಗಗಳಾವುವು?